## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 595
ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 11.03.2025
ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು.

| | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಮಹಾನಗರ ಪಾಲಿಕೆಯ ಅಧೀನದಲ್ಲಿರುವ ಜಲಮಂಡಳಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೀರು ಸರಬರಾಜು ನೌಕರರ ಸಂಖ್ಯೆ ಎಷ್ಟು; | ಶಿವಮೊಗ್ಗ ಮಹಾನಗರ ಪಾಲಿಕೆಯ ಅಧೀನದಲ್ಲಿರುವ ಜಲಮಂಡಳಿಯಲ್ಲಿ ಒಟ್ಟು 116 ಜನ ನೀರು ಸರಬರಾಜು ನೌಕರರು ಹೊರಗುತ್ತಿಗೆ ಆಧಾರದ ಮೇಲೆ ಸುಮಾರು 15 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ) | ಇವರು ಕಳೆದ ಎಷ್ಟು ವರ್ಷಗಳಿಂದ ಹೊರಗುತ್ತಿಗೆ ನೌಕರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ; | |
| ಇ) | ಸ್ಥಳೀಯ ಸಂಸ್ಥೆಗಳ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಈ ಹೊರಗುತ್ತಿಗೆ ನೌಕರರನ್ನು ಖಾಯಂ ನೌಕರರನ್ನಾಗಿ ಪರಿಗಣಿಸಬೇಕೆಂಬ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು; | ರಾಜ್ಯದ ಮಹಾನಗರ ಪಾಲಿಕೆಗಳ (ಬಿಬಿಎಂಪಿ ಹೊರತುಪಡಿಸಿ) ನೀರು ಸರಬರಾಜು ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ / ಕ್ಷೇಮಾಭಿವೃದ್ಧಿ / ಸಮಾನ ಕೆಲಸಕ್ಕೆ ಸಮಾನ ವೇತನ /ಗುತ್ತಿಗೆ /ಹೊರಗುತ್ತಿಗೆ ಇತರೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು 1504 ನೀರು ಸರಬರಾಜು ನೌಕರರನ್ನು ಖಾಯಂ ಮಾಡುವ ಬಗ್ಗೆ, ಸರ್ಕಾರಕ್ಕೆ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ, ಎಲ್ಲಾ ಹೊರಗುತ್ತಿಗೆ ನೌಕರರ ವೇತನವನ್ನು ಯಥಾಸ್ಥಿತಿ ಪ್ರಕಾರ ಮುಂದುವರೆಸಲು ಮತ್ತು ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಂತೆ ವೇತನ ಪಾವತಿಸಲು ಕ್ರಮವಹಿಸುವಂತೆ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.<br><br>ಅದರಂತೆ, ಸರ್ಕಾರದ ಪತ್ರ ಸಂಖ್ಯೆ: ನಅಇ 11 ಜಿಇಎಲ್ 2023 ದಿನಾಂಕ: 06/03/2024ರಲ್ಲಿ ಎಲ್ಲಾ ಹೊರಗುತ್ತಿಗೆ ನೌಕರರ ವೇತನವನ್ನು ಯಥಾಸ್ಥಿತಿ ಪ್ರಕಾರ ಮುಂದುವರೆಸಲು ಮತ್ತು ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಂತೆ ವೇತನ ಪಾವತಿಸಲು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>ನಂತರ, ಪೌರಾಡಳಿತ ನಿರ್ದೇಶನಾಲಯದಿಂದ ದಿನಾಂಕ: 25/10/2024ರ ಪತ್ರದಲ್ಲಿ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರುಗಳಿಗೆ ಹೊರಗುತ್ತಿಗೆ ನೌಕರರ ವೇತನವನ್ನು ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಂತೆ ನಿಯಮಾನುಸಾರ ವೇತನ ಪಾವತಿಸಲು ಕ್ರಮವಹಿಸುವಂತೆ ನಿರ್ದೇಶನ ನೀಡಲಾಗಿರುತ್ತದೆ.<br><br>ಮಹಾನಗರ ಪಾಲಿಕೆಗಳಲ್ಲಿ ಹೊರಗುತ್ತಿಗೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳನ್ನು ಖಾಯಂ ನೌಕರರನ್ನಾಗಿ ಪರಿಗಣಿಸಲು ಪ್ರಸ್ತುತ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಈ) | ಈ ನೌಕರರನ್ನು ಹೊರಗುತ್ತಿಗೆಯಿಂದ ಬಿಡುಗಡೆ ಮಾಡಿ ಖಾಯಂಗೊಳಿಸಿ ನೇರ ಪಾವತಿಯಡಿ ಸರ್ಕಾರ ಪರಿಗಣಿಸುವುದೇ? | |

**ಸಂಖ್ಯೆ: ನಅಇ 15 ಶಿಮಪಾ 2025 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ
ಯೋಜನಾ ಸಚಿವರು